# ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೆ.ಹರೀಶ್ ಕುಮಾರ್ ಇವರು ನಿಯಮ 72 ರಡಿ ಸಲ್ಲಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.

**ಪ್ರಶ್ನೆ:**

2019-20 ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಲಾದ ಕ್ರೈಸ್ತ ಅಭಿವೃದ್ಧಿ ನಿಗಮದ ಜೊತೆಗೆ ರೂ.200.00 ಕೋಟಿ ಅನುದಾನವನ್ನು ಕ್ರೈಸ್ತ ಸಮುದಾಯದ ಅಭಿವೃದ್ಧಿಗಾಗಿ ಮೀಸಲಿಡಲಾಗಿದ್ದು, ಇದನ್ನು ಅನುಷ್ಠಾನ ಮಾಡದೆ ಇರುವ ಬಗ್ಗೆ ಮಾನ್ಯ ಅಲ್ಪಸಂಖ್ಯಾತರ ಕಲ್ಯಾಣ ಸಚಿವರ ಗಮನ ಸೆಳೆಯಬಯಸುತ್ತೇನೆ.

**ಉತ್ತರ:**

2019-20 ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-182 ರಲ್ಲಿ "2019-20ನೇ ಸಾಲಿನಲ್ಲಿ ಹೊಸದಾಗಿ ಕ್ರಿಶ್ಚಿಯನ್ ಅಭಿವೃದ್ಧಿ ನಿಗಮವನ್ನು ಸ್ಥಾಪಿಸುವ ಮೂಲಕ ಕ್ರಿಶ್ಚಿಯನ್ ಸಮುದಾಯದ ಸಮಗ್ರ ಅಭಿವೃದ್ಧಿ ಕಾರ್ಯಕ್ರಮಗಳನ್ನು ರೂ.200.00 ಕೋಟಿ ವೆಚ್ಚದಲ್ಲಿ ಕೈಗೊಳ್ಳಲಾಗುವುದು" ಎಂದು ಮಾನ್ಯ ಮುಖ್ಯಮಂತ್ರಿಯವರು ಘೋಷಿಸಿರುತ್ತಾರೆ.

ಕ್ರೈಸ್ತ ಅಭಿವೃದ್ಧಿ ನಿಗಮವನ್ನು ಸ್ಥಾಪಿಸಲು ಸಂಬಂಧಿಸಿದ ಕಡತ ಸಂಖ್ಯೆ:MWD 293 MDS 2019 ರನ್ನು ಆರ್ಥಿಕ ಇಲಾಖೆಯವರ ಟಿಪ್ಪಣಿ ಸಂಖ್ಯೆ: (FD 268 EXP-3/2020 Dt:28.04.2020) ರಲ್ಲಿ ಈ ಕೆಳಕಂಡಂತೆ ಅಭಿಪ್ರಾಯ ನೀಡಿರುತ್ತಾರೆ.

" The proposal has been examined, Finance Department advices Administrative Department not to pursue formation of the Christian Development Corporation, as was discussed and decided in pre-Budget meeting with Hon'ble Chief Minister"

ಆರ್ಥಿಕ ಇಲಾಖೆರವರು ನೀಡಿರುವ ಅಭಿಪ್ರಾಯದ ಹಿನ್ನೆಲೆಯಲ್ಲಿ ಸಕ್ಷಮ ಪ್ರಾಧಿಕಾರದ ಅನುಮೋದನೆಯೊಂದಿಗೆ ಕ್ರೈಸ್ತ ಅಭಿವೃದ್ಧಿ ನಿಗಮವನ್ನು ಸ್ಥಾಪಿಸದಿರಲು ನಿರ್ಣಯಕೈಗೊಳ್ಳಲಾಗಿರುತ್ತದೆ.

(ಶ್ರೀಮಂತ ಬಾಳಾಸಾಹೇಬ ಪಾಟೀಲ್)
ಕೈಮಗ್ಗ, ಜವಳಿ ಹಾಗೂ ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು

**ಕಡತ ಸಂಖ್ಯೆ: MWD 35 LMQ 2021**